ಆ) ಈ ಗಾರ್ಮೆಂಟ್ಸ್‌ಗಳಲ್ಲಿ ದುಡಿಯುತ್ತಿರುವ ಕಾರ್ಮಿಕರ ಸಂಖ್ಯೆ ಎಷ್ಟು (ಪುರಷ: ಮಹಿಳೆ)

ಇ) ಈ ಗಾರ್ಮೆಂಟ್ಸ್‌ಗಳಲ್ಲಿ ಕನಿಷ್ಠ ಕೂಲಿಯನ್ನು ನೀಡದೆ ಇರುವ ಘಟಕಗಳೆಷ್ಟು?

ಈ) ಕಾರ್ಮಿಕರಿಗೆ ಕನಿಷ್ಠ ಕೂಲಿ: ಇತರೆ ಭತ್ಯೆಗಳನ್ನು ನೀಡದೆ ಮಾಲೀಕರುಗಳು ಘಟಕಗಳನ್ನು ಮುಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಉ) ಬಂದಿದ್ದಲ್ಲಿ ಈ ಬಗ್ಗೆ ಕೈಗೊಂಡ ಕ್ರಮಗಳೇನು?

ಶ್ರೀ ಬಿ. ಸತ್ಯನಾರಾಯಣ (ಕಾರ್ಮಿಕ ರಾಜ್ಯ ಸಚಿವರು) :

ಅ) 117

ಆ) 19,403

ಪುರುಷರು - 5,587

ಮಹಿಳೆಯರು - 13,816

ಇ) ನಾಲ್ಕು ಗಾರ್ಮೆಂಟ್ಸ್ ಕಾರ್ಖಾನೆಗಳಲ್ಲಿ ಕನಿಷ್ಠ ವೇತನ ಕಾಯ್ದೆ ಉಲ್ಲಂಘನೆಯಾಗಿರುವುದು ಗಮನಕ್ಕೆ ಬಂದಿದೆ.

ಈ) ಇಲ್ಲ

ಉ) ಉದ್ಭವಿಸುವುದಿಲ್ಲ

ಬೆಂಗಳೂರು ನಗರದಲ್ಲಿ ಕನಿಷ್ಠ ಕೂಲಿ ಕಾಯ್ದೆಯನ್ನು ಅಸಂಘಟಿತ ಕಾರ್ಮಿಕರಿಗೆ ಜಾರಿಗೊಳಿಸುವುದು

226 (423) ಶ್ರೀ ಜಿ.ವಿ. ಶ್ರೀರಾಮರೆಡ್ಡಿ (ಬಾಗೇಪಲ್ಲಿ) : ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ಬೆಂಗಳೂರು ನಗರದಲ್ಲಿ ದುಡಿಯುತ್ತಿರುವ ಅಸಂಘಟಿತ ಕಾರ್ಮಿಕರ ಸಂಖ್ಯೆ ಎಷ್ಟು ?

ಆ) ಕನಿಷ್ಠ ಕೂಲಿ ಕಾಯ್ದೆಯನ್ನು ಅಸಂಘಟಿತ ಕಾರ್ಮಿಕರು ವೇತನ, ಸೌಲಭ್ಯಗಳನ್ನು ಪಡೆಯುತ್ತಿರುವರೇ,

ಇ) ಕನಿಷ್ಠ ಕೂಲಿಯನ್ನು ಪಡೆಯದೇ ಇರುವ ಅಸಂಘಟಿತ ಕಾರ್ಮಿಕರ ಸಂಖ್ಯೆ ಎಷ್ಟು

ಈ) ಕನಿಷ್ಠ ಕೂಲಿ ಕಾಯ್ದೆಯನ್ನು ಸಮರ್ಪಕವಾಗಿ ಜಾರಿಗೊಳಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು?

ಶ್ರೀ ವಿ. ಸತ್ಯನಾರಾಯಣ (ಕಾರ್ಮಿಕ ರಾಜ್ಯ ಸಚಿವರು) :

ಅ) ಸಮೀಕ್ಷೆಯನ್ನು ಕೈಗೊಂಡಿರುವುದಿಲ್ಲ

ಕಾರಣ ವಿವರಗಳು ಲಭ್ಯವಿರುವುದಿಲ್ಲ

ಆ) ಹೌದು. ಅನುಸೂಚಿತ ಉದ್ದಿಮೆಯ ವ್ಯಾಪ್ತಿಗೆ ಒಳಪಡುವ ಅಸಂಘಟಿತ ಕಾರ್ಮಿಕರಿಗೆ ಸಂಬಂಧಪಟ್ಟಂತೆ ಕನಿಷ್ಠ ವೇತನವನ್ನು ಜಾರಿಗೊಳಿಸಲಾಗುತ್ತಿದೆ.

ಇ) ಸಮೀಕ್ಷೆಯನ್ನು ಕೈಗೊಂಡಿರುವುದಿಲ್ಲ. ಕಾರಣ ವಿವರಗಳು ಲಭ್ಯವಿರುವುದಿಲ್ಲ.

ಈ) 1. 62 ಉದ್ದಿಮೆಗಳನ್ನು ಅನುಸೂಚಿಯಲ್ಲಿ ಅಡಿಯಲ್ಲಿ ತರಲಾಗಿದೆ.

2. 56 ಉದ್ದಿಮೆಗಳಿಗೆ ಕನಿಷ್ಠ ವೇತನವನ್ನು ನಿಗದಿಪಡಿಸಲಾಗಿದೆ.

3. 16,818 ಪರಿವೀಕ್ಷಣೆಗಳನ್ನು ಮಾಡಲಾಗಿದೆ.

4. 134 ಮೊಕದ್ದಮೆಗಳನು ಹೂಡಲಾಗಿದೆ.

5. ಇಲ್ಲಿಯವರೆಗೆ 64 ಪ್ರಕರಣಗಳು ದೋಷನಿರ್ಣಯಗೊಂಡಿವೆ. ಮತ್ತು

6. ಕಾಯಿದೆಯ ಉಪಬಂಧಗಳನ್ನು ಕಟ್ಟುನಿಟ್ಟಾಗಿ ಜಾರಿತೆ ತರಲಾಗುತ್ತಿದೆ.

ಬಂಟ್ವಾಳ ಮೈಸೂರು ಹೆದ್ದಾರಿ ದುರಸ್ತಿ

228 (460) ಶ್ರೀ ಡಿ.ವಿ. ಸದಾನಂದ ಗೌಡ (ಪುತ್ತೂರು) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ಬಂಟ್ವಾಳ ಮೈಸೂರು ರಾಜ್ಯ ಹೆದ್ದಾರಿಯು ಅತ್ಯಂತ ದುರಸ್ತಿಯಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ದುರಸ್ತಿಗಾಗಿ ಹಣ ಬಿಡುಗಡೆ ಮಾಡುವ ಇರಾದೆ ಸರ್ಕಾರಕ್ಕಿದೆಯೇ;

ಇ) ಹಾಗಿದ್ದಲ್ಲಿ, ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; ದುರಸ್ತಿ ಕಾರ್ಯ ಯಾವಾಗ ಪೂರ್ತಿಗೊಳಿಸಲಾಗುವುದು?

ಶ್ರೀ ಸಿ. ಎಂ. ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಇಲ್ಲ

ಆ) ದುರಸ್ತಿಗಾಗಿ ಈಗಾಗಲೇ ಹಣ ಬಿಡುಗಡೆ ಮಾಡಿದೆ

ಇ) ಈ ರಸ್ತೆಯು ವಾರ್ಷಿಕ ನಿರ್ವಹಣೆಗಾಗಿ ಈ ಸಾಲಿನಲ್ಲಿ 26.40 ಲಕ್ಷ ರೂ. ಬಿಡುಗಡೆ ಮಾಡಿದ್ದು ರಸ್ತೆಯ ಮರು ಡಾಂಬರೀಕರಣಕ್ಕಾಗಿ 91.00 ಲಕ್ಷ ರೂ. ಅನುದಾನ ಒದಗಿಸಲಾಗಿದೆ. ಈ ಎಲ್ಲಾ ಕಾಮಗಾರಿಗಳನ್ನು ನಿರ್ವಹಿಸಲು ಕ್ರಮ ಕೈಗೊಂಡಿದ್ದು, ಕಾಮಗಾರಿಯನ್ನು 1998ರ ಮಳೆಗಾಲದ ಮುನ್ನ ಸಂಪೂರ್ಣಗೊಳಿಸಲಾಗುವುದು.

ಜಿಲ್ಲೆಗಳಲ್ಲಿ ರಸ್ತೆಗಳ ದುರಸ್ಥಿ ಕಾರ್ಯ

229 (515) ಶ್ರೀ ಬಿ.ಬಿ. ಶಿವಪ್ಪ (ಸಕಲೇಶಪುರ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ